( ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು )

ಅಸಲು ದಾವೆ ನಂ.363/2017

ದಿನಾಂಕಃ 09-11-2022, ಡಿ ಡಬ್ಲ್ಯೂ–1

| | |
|---|---|
| ಹೆಸರುಃ | ಚಲುವೇಗೌಡ |
| ತಂದೆಯ ಹೆಸರುಃ | ಜವರೇಗೌಡ |
| ವಯಸ್ಸುಃ | 52 ವರ್ಷ |
| ವೃತ್ತಿಃ | ವ್ಯವಸಾಯ |
| ವಾಸಃ | ಚಿಕ್ಕ ಅರಕಲಗೂಡು ಗ್ರಾಮ |

ಪ್ರತಿವಾದಿಯ ಮುಖ್ಯ ವಿಚಾರಣೆ ಃ ಶ್ರೀ ಎಂ ಟಿ ಎಸ್ ವಕೀಲರಿಂದಃ

ಈ ಪ್ರಕರಣದಲ್ಲಿ ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದರ ಪ್ರತಿ ಪುಟದಲ್ಲಿರುವ ಸಹಿಯೂ ನನ್ನದೇ ಆಗಿರುತ್ತದೆ.

1. ದಿಃ 01-10-2017 ರ ಕ್ರಯ ಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-1 ಎಂದು ಗುರುತಿಸಲಾಯಿತು.

2. ಕಂದಾಯ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ -2 ಎಂದು ಗುರುತಿಸಲಾಯಿತು.

3. 2017-18 ನೇ ಸಾಲಿನ ಡಿಮ್ಯಾಂಡ್ ರಿಜಿಸ್ಟರ್‌ನ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಡಿ- 3 ರಿಂದ 5 ಎಂದು ಗುರುತಿಸಲಾಯಿತು.

4. 8 ಛಾಯ ಚಿತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ -6 ರಿಂದ 13 ಎಂದು ಗುರುತಿಸಲಾಯಿತು.

ಪ್ರತಿವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶವನ್ನು ಕೋರಿದ್ದು ಕಾಲವಕಾಶ ನೀಡಲಾಯಿತು.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇದೆ.

(ರಘು ಎಂ.)
2ನೇ ಅಧಿಕ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ
ಅರಕಲಗೂಡು